ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 03 ಆರ್‌ಟಿಐ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ;19.01.2013

ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ2005ರಡಿ ಪ್ರತಿ ಇಲಾಖೆಯಲ್ಲೂ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರದ ಹೆಸರುಗಳನ್ನು ನಾಮಫಲಕದಲ್ಲಿ ಬರೆಯಿಸಿ ಹಾಕುವ ಬಗ್ಗೆ.

- - -

ಕರ್ನಾಟಕ ಮಾಹಿತಿ ಆಯೋಗವು ತನ್ನ ಮುಂದೆ ದಾಖಲಾಗಿದ್ದ ಪ್ರಕರಣ ಸಂಖ್ಯೆ:ಕೆಐಸಿ 2532 ಪಿಟಿಎನ್ 2012ರಲ್ಲಿ [ಶ್ರೀ ಜಿ.ವಿನ್ಸಂಟ್ ವಿರುದ್ಧ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜಕೀಯ), ವಿಧಾನ ಸೌಧ, ಬೆಂಗಳೂರು] ದಿನಾಂಕ 11.12.2012ರಂದು ನೀಡಿದ ಆದೇಶದಲ್ಲಿ ಕರ್ನಾಟಕ ಮಾಹಿತಿ ಆಯೋಗವು, ಸಾರ್ವಜನಿಕ ಪ್ರಾಧಿಕಾರಗಳು (ಮಾಹಿತಿ ಹಕ್ಕು ಕಾಯ್ದೆಯ ಸೆಕ್ಷನ್ 4(1)(ಎ) ಮತ್ತು 4(1)(ಬಿ)ಗಳಡಿಯಲ್ಲಿ ಮಾಹಿತಿಗಳನ್ನು ಸಿದ್ಧಪಡಿಸಿ ಇಲಾಖಾ ಸೂಚನಾಫಲಕಗಳಲ್ಲಿ ಪ್ರಕಟಿಸದಿರುವ ಬಗ್ಗೆ ಹಾಗೂ ತನ್ನ ಮುಂದೆ ದಾಖಲಾದ ಪ್ರಕರಣಗಳಲ್ಲಿ ಮಾಹಿತಿ ಕೋರಿಕೆ ಅರ್ಜಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿ/ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ಕಾಯ್ದೆಯನುಸಾರ ವಿಲೇಗೊಳಿಸದಿರುವ ಬಗ್ಗೆ ಆಕ್ಷೇಪಿಸಿ,ಈ ಬಗ್ಗೆ ಸರ್ಕಾರಕ್ಕೆ ಸೂಚನೆಗಳನ್ನು ನೀಡುತ್ತಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸುತ್ತಾ, ಈ ರೀತಿ ಆಗುತ್ತಿರುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಲಾಗಿದೆ:)

ಎಲ್ಲಾ ಇಲಾಖೆಗಳು ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳ ಹೆಸರು ಮತ್ತು ಹುದ್ದೆಗಳ ಮಾಹಿತಿಯನ್ನೊಳಗೊಂಡ ಇಲಾಖಾ ಸೂಚನಾಫಲಕವನ್ನು ತಪ್ಪದೇ ಪ್ರದರ್ಶಿಸತಕ್ಕದ್ದು.

ಮೇಲಿನ ಸೂಚನೆಗಳನ್ನು ಪಾಲಿಸುವಂತೆ ತಮ್ಮ ಆಡಳಿತಾಧೀನದ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳಿಗೆ, ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳಿಗೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಿದೆ.

(ಪರಮೇಶ್ ಪಾಂಡೆ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

ಇವರಿಗೆ.
ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.

ಪ್ರತಿ:- ಮಾಹಿತಿಗಾಗಿ
1.ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ
2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನಸೌಧ
3.ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹು ಮಹಡಿ ಕಟ್ಟಡ.